# ಕರ್ನಾಟಕ ಸರ್ಕಾರದ ನಡವಳಿಗಳು

***ವಿಷಯ:-*** ಶ್ರೀ ಶಂಕರ ಮಳಗಿ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಗ್ ಉಪವಿಭಾಗ, ಕೊಪ್ಪಳ ಇವರು ನ್ಯಾಯಾಂಗ ಬಂಧನದಲ್ಲಿ ಕಳೆದ ಅವಧಿಯನ್ನು ಅಮಾನತ್ತು ಅವಧಿ ಎಂದು ಪರಿಗಣಿಸುವ ಬಗ್ಗೆ ಆದೇಶ.

***ಓದಲಾಗಿದೆ:*** 1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ ಇವರ ಪತ್ರ ಸಂಖ್ಯೆ:ಜಿಪಂಕೊ/ಆಡಳಿತ/ಎ.ಸಿ.ಬಿ/ಸಿಆರ್-12/2018-19/2094, ದಿ:17.11.2018.

2. ಶ್ರೀ ಶಂಕರ ಮಳಗಿ, ಹಿಂದಿನ ಸ.ಕಾ.ಇಂ ಇವರ ಮನವಿ ದಿ:03.12.2018

* * * * *

***ಪ್ರಸ್ತಾವನೆ:-***

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ ಇವರು ಮೇಲೆ ಓದಲಾದ ಕ್ರಮಾಂಕ (1) ರ ಪತ್ರದೊಂದಿಗೆ ಪ್ರಥಮ ವರ್ತಮಾನ ವರದಿಯ ಪ್ರತಿಯನ್ನು ಲಗತ್ತಿಸಿ ಕಳುಹಿಸಿ ಶ್ರೀ ಶಂಕರ ಮಳಗಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು ಕುಮಾರಿ ಶಿಲ್ಪಾ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಕೊಪ್ಪಳ ಇವರುಗಳ ವಿರುದ್ದ ಭ್ರಷ್ಟಾಚಾರ ನಿಯಂತ್ರಣ ಪೊಲೀಸ್ ಠಾಣೆ, ಕೊಪ್ಪಳ ಇಲ್ಲಿ ಗುನ್ನೆ ಸಂಖ್ಯೆ:08/2018 ಕಲಂ 7(ಎ) ಲಂಚ ಪ್ರತಿಬಂಧಕ ಕಾಯ್ದೆ-1988 ರಿತ್ಯ ಪ್ರಕರಣ ದಾಖಲಿಸಿಕೊಂಡುವ ತನಿಖೆ ಕೈಗೊಳ್ಳಲಾಗಿದೆಯೆಂದು ಆರೋಪಿಗಳ ಪೈಕಿ ಕುಮಾರಿ ಶಿಲ್ಪಾ ಇವರ ಶಿಸ್ತು ಪ್ರಾಧಿಕಾರವು ಜಿಲ್ಲಾ ಪಂಚಾಯತ್ ಆಗಿರುವುದರಿಂದ ಅವರ ವಿರುದ್ದ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸಿ, ಸೇವೆಯಿಂದ ಅಮಾನತ್ತು ಪಡಿಸಲಾಗಿರುತ್ತದೆಯೆಂದು ಮತ್ತೊಬ್ಬ ಆರೋಪಿತರಾದ ಶ್ರೀ ಶಂಕರ್ ಮಳಗಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ಪ್ರಭಾರಿ ಕಾ.ಇಂ, ಪಂ.ರಾ.ಇಂ ವಿಭಾಗ, ಕೊಪ್ಪಳ ಮತ್ತು ಗ್ರಾ.ಕು.ನೀ ಮತ್ತು ನೈರ್ಮಲ್ಯ ವಿಭಾಗ, ಕೊಪ್ಪಳ) ಇವರ ವಿರುದ್ಧ ಸರ್ಕಾರದ ಹಂತದಲ್ಲಿ ಶಿಸ್ತುಕ್ರಮ ಕೈಗೊಳ್ಳಲು ಕೋರಿರುತ್ತಾರೆ.

ಶ್ರೀ ಶಂಕರಮಳಗಿ, ಇವರು ಮೇಲೆ ಓದಲಾದ ಕ್ರಮಾಂಕ (2) ರ ದಿನಾಂಕ:03.12.2018 ರಂದು ಸಲ್ಲಿಸಿದ್ದ ಮನವಿಯಲ್ಲಿ ಶ್ರೀ ಶಿವಪ್ಪ ತಂದೆ ಮಲ್ಲಪ್ಪ ಚರಾರಿ ಇವರು ನನ್ನ ವಿರುದ್ದ ಲಂಚ ಬೇಡಿಕೆಯ ಆರೋಪವನ್ನು ಮಾಡಿ ದೂರು ಸಲ್ಲಿಸಿದ್ದು ಭ್ರಷ್ಟಾಚಾರ ನಿಗ್ರಹ ದಳ ರವರು ದಿನಾಂಕ:14.11.2018 ರಂದು ಬಂಧಿಸಿದ್ದು ತಾವು ದಿನಾಂಕ 24.11.2018 ರವರೆಗೆ ನ್ಯಾಯಾಂಗ ಬಂಧನದಲ್ಲಿದ್ದು ಜಾಮೀನಿನ ಮೇಲೆ ಬಿಡುಗಡೆಯಾಗಿರುವುದಾಗಿಯೂ ಹಾಗೂ ತಮಗೆ ಕರ್ತವ್ಯಕ್ಕೆ ಹಾಜರಾಗಲು ಅನುಮತಿ ನೀಡಬೇಕೆಂದು ಕೋರಿದ್ದಾರೆ.

ಪ್ರಕರಣಕ್ಕೆ ಸಂಬಂಧಿಸಿದ ದಾಖಲೆಗಳನ್ನು ಸರ್ಕಾರವು ಪರಿಶೀಲಿಸಿರುತ್ತದೆ. ಶ್ರೀ ಶಂಕರ ಮಳಗಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂ.ರಾ.ಇಂ.ಉಪವಿಭಾಗ ಕೊಪ್ಪಳ ಇವರು ಪಂ.ರಾ.ಇಂ. ವಿಭಾಗ, ಕೊಪ್ಪಳ ಕಛೇರಿಯ ಕಾರ್ಯಪಾಲಕ ಇಂಜಿನಿಯರ್ ಹುದ್ದೆಯ ಹೆಚ್ಚುವರಿ ಪ್ರಭಾರದಲ್ಲಿ ಕೆಲಸ ನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಶ್ರೀ ಶಿವಪ್ಪ ತಂದೆ ಮಲ್ಲಪ್ಪ ಇವರ ಕಛೇರಿಯ ಕೆಲಸದ ನಿಮಿತ್ತವಾಗಿ 10,000/- ರೂ.ಗಳ ಅಕ್ರಮ ಸಂಭಾವನೆಗೆ ಬೇಡಿಕೆ ಇಟ್ಟಿರುವುದು ಹಾಗೂ ಈ ಸಂಬಂಧ ಭ್ರಷ್ಟಾಚಾರ ನಿಗ್ರಹ ದಳದಲ್ಲಿ ಗುನ್ನ ಸಂಖ್ಯೆ 8/2018 ನ್ನು ಲಂಚ ಪ್ರತಿಬಂಧಕ ಕಾಯ್ದೆಯ ಕಲಂ 7(ಎ) ರ ಅನುಸಾರ ದಾಖಲಿಸಿ ಕ್ರಮಕೈಗೊಂಡಿರುತ್ತಾರೆ. ಅಕ್ರಮ ಸಂಭಾವನೆಯ ಮೊತ್ತವನ್ನು ಶ್ರೀ ಶಂಕರ ಮಳಗಿ, ಪ್ರಭಾರಿ ಕಾರ್ಯಪಾಲಕ ಇಂಜಿನಿಯರ್ ಇವರ

ಅಧೀನದಲ್ಲಿ ಕೆಲಸ ನಿರ್ವಹಿಸುತ್ತಿರುವ ಕುಮಾರಿ ಶಿಲ್ಪ ಕಿರಿಯ ಇಂಜಿನಿಯರ್‌ರವರು ಸ್ವೀಕರಿಸಿದ್ದು ಈ ಇಬ್ಬರು ಆಪಾದಿತರು ಅಕ್ರಮ ಸಂಭಾವನೆಗಾಗಿ ಬೇಡಿಕೆ ಸಲ್ಲಿಸುವ ಮೂಲಕ ತೀವ್ರ ಸ್ವರೂಪದ ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುತ್ತದೆ. ಹಾಗಾಗಿ ಈ ಇಬ್ಬರು ನೌಕರರು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯವನ್ನು ಪ್ರಮಾಣಿಕವಾಗಿ ನಿರ್ವಹಿಸದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ವರ್ತಿಸಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966 ರ ನಿಯಮ 3(1) ನ್ನು ಉಲ್ಲಂಘಿಸಿರುತ್ತಾರೆ. ಅಲ್ಲದೆ ಅವರನ್ನು ಸೇವೆಯಲ್ಲಿ ಮುಂದುವರೆಸಿದ್ದಲ್ಲಿ ಸಾಕ್ಷಿಗಳ ಮೇಲೆ ಪ್ರಭಾವ ಬೀರುವ ಮತ್ತು ದಾಖಲೆಗಳ ನಾಶಪಡಿಸುವ ಸಾಧ್ಯತೆ ಇರುವುದರಿಂದ ಅವರನ್ನು ಸೇವೆಯಲ್ಲಿ ಮುಂದುವರೆಸುವುದು ಸೂಕ್ತವಾಗಿರುವುದಿಲ್ಲ.

ಆದ್ದರಿಂದ, ಸದರಿಯವರ ವಿರುದ್ಧ ದಾಖಲಾಗಿರುವ ಮೊಕದ್ದಮೆ ಮತ್ತು ಈ ಸಂಬಂಧ ಕೈಗೊಳ್ಳಬಹುದಾದ ಕ್ರಮಗಳನ್ನು ಬಾಕಿ ಇರಿಸಿ ಶ್ರೀ ಶಂಕರ ಮಳಗಿ ಇವರನ್ನು ಸೇವೆಯಿಂದ ಅಮಾನತ್ತು ಪಡಿಸಲು ಸರ್ಕಾರವು ತೀರ್ಮಾನಿಸಿದೆ. ಆದ್ದರಿಂದ ಈ ಆದೇಶ.

**ಆದೇಶ ಸಂಖ್ಯೆ:ಗ್ರಾಅಪ 106 ಇಎನ್‌ಕ್ಯೂ 2018 ಬೆಂಗಳೂರು, ದಿನಾಂಕ:31.12.2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಶಂಕರ ಮಳಗಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಕೊಪ್ಪಳ ಇವರ ವಿರುದ್ಧ ಭ್ರಷ್ಟಾಚಾರ ನಿಯಂತ್ರಣ ಪೋಲೀಸ್ ಠಾಣೆ, ಕೊಪ್ಪಳ ಇಲ್ಲಿ ದಾಖಲಾಗಿರುವ ಪ್ರಕರಣ ಸಂಖ್ಯೆ: 08/2018 ಕ್ಕೆ ಸಂಬಂಧಿಸಿದಂತೆ ನ್ಯಾಯಂಗ ಬಂಧನದಲ್ಲಿ ಕಳೆದ ದಿನಾಂಕ:14.11.2018 ರಿಂದ 24.11.2018 ರವರೆಗಿನ ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು, 1957 ರ ನಿಯಮ 10 (2) (ಎ) ರ ಅನುಸಾರ ಅಮಾನತ್ತಿನಲ್ಲಿ ಕಳೆದ ಅವದಿ ಎಂದು ಪರಿಗಣಿಸಿ ಆದೇಶಿಸಿದೆ.

ಮುಂದುವರೆದು, ಶ್ರೀ ಶಂಕರ ಮಳಗಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಕೊಪ್ಪಳ ಇವರ ವಿರುದ್ಧ ದಾಖಲಾಗಿರುವ ಅಕ್ರಮ ಸಂಭಾವನೆಯ ಮೊಕದ್ದಮೆ ಹಾಗೂ ತತ್ಸಂಬಂಧದ ಕ್ರಮಗಳನ್ನು ಬಾಕಿ ಇರಿಸಿ ಸದರಿಯವರನ್ನು ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು, 1957 ರ ನಿಯಮ 10 (1) (ಎ) ರನ್ವಯ ತಕ್ಷಣದಿಂದ ಜಾರಿಗೆ ಬರುವಂತೆ ಸೇವೆಯಿಂದ ಅಮಾನತ್ತು ಪಡಿಸಿದೆ.

ಅಮಾನತ್ತಿನ ಅವದಿಯಲ್ಲಿ ಸದರಿಯವರು ನಿಯಮಾನುಸಾರ ಜೀವನಾಧಾರ ಭತ್ಯೆಗೆ ಅರ್ಹರಿರುತ್ತಾರೆ. ಸಕ್ಷಮ ಪ್ರಾಧಿಕಾರದ ಅನುಮೋದನೆ ಇಲ್ಲದೆ ಕೇಂದ್ರ ಸ್ಥಾನವನ್ನು ಬಿಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

31/12/2018

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, (ಲೆಕ್ಕ ಪತ್ರ 1&2)/(ಆಡಿಟ್) ಕರ್ನಾಟಕ,. ಬೆಂಗಳೂರು.
2. ಅಪರ ಪೋಲೀಸ್ ಮಹಾ ನಿರ್ದೇಶಕರು, ಭ್ರಷ್ಟಾಚಾರ ನಿಯಂತ್ರಣ ದಳ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.

3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು, ಕೆ.ಆರ್.ವೃತ್ತ, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲ ಸಾರಿಗೆ ಇಲಾಖೆ, (ಸೇವೆಗಳು–ಎ ಮತ್ತು ಸಿ).
7. ಸಂಬಂಧಪಟ್ಟ ಅಧಿಕಾರಿ
8. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು
9. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ ಇವರ ಆಪ್ತ ಕಾರ್ಯದರ್ಶಿ
10. ಶಾಖಾ ರಕ್ಷಾ ಕಡತ/ಕಂಪ್ಯೂಟರ್ ಸೆಲ್/ ಹೆಚ್ಚುವರಿ ಪ್ರತಿ.

## ಕರ್ನಾಟಕ ಸರ್ಕಾರದ ನಡವಳಿಗಳು

*ವಿಷಯ:-* ಶ್ರೀ ಶಂಕರ ಮಳಗಿ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಗ್ ಉಪವಿಭಾಗ, ಕೊಪ್ಪಳ ಇವರು ನ್ಯಾಯಾಂಗ ಬಂಧನದಲ್ಲಿ ಕಳೆದ ಅವಧಿಯನ್ನು ಅಮಾನತ್ತು ಅವಧಿ ಎಂದು ಪರಿಗಣಿಸುವ ಬಗ್ಗೆ ಆದೇಶ.

*ಓದಲಾಗಿದೆ:* 1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ ಇವರ ಪತ್ರ ಸಂಖ್ಯೆ:ಜಿಪಂಕೊ/ಆಡಳಿತ/ಎ.ಸಿ.ಬಿ/ಸಿಆರ್-12/2018-19/2094, ದಿ:17.11.2018.

2. ಶ್ರೀ ಶಂಕರ ಮಳಗಿ, ಹಿಂದಿನ ಸ.ಕಾ.ಇಂ ಇವರ ಮನವಿ ದಿ:03.12.2018

* * * * *

**ಪ್ರಸ್ತಾವನೆ:-**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ ಇವರು ಮೇಲೆ ಓದಲಾದ ಕ್ರಮಾಂಕ (1) ರ ಪತ್ರದೊಂದಿಗೆ ಪ್ರಥಮ ವರ್ತಮಾನ ವರದಿಯ ಪ್ರತಿಯನ್ನು ಲಗತ್ತಿಸಿ ಕಳುಹಿಸಿ ಶ್ರೀ ಶಂಕರ ಮಳಗಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು ಕುಮಾರಿ ಶಿಲ್ಪಾ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಕೊಪ್ಪಳ ಇವರುಗಳ ವಿರುದ್ಧ ಭ್ರಷ್ಟಾಚಾರ ನಿಯಂತ್ರಣ ಪೋಲೀಸ್ ಠಾಣೆ, ಕೊಪ್ಪಳ ಇಲ್ಲಿ ಗುನ್ನೆ ಸಂಖ್ಯೆ:08/2018 ಕಲಂ 7(ಎ) ಲಂಚ ಪ್ರತಿಬಂಧಕ ಕಾಯ್ದೆ-1988 ರಿತ್ಯ ಪ್ರಕರಣ ದಾಖಲಿಸಿಕೊಂಡುವ ತನಿಖೆ ಕೈಗೊಳ್ಳಲಾಗಿದೆಯೆಂದು ಆರೋಪಿಗಳ ಪೈಕಿ ಕುಮಾರಿ ಶಿಲ್ಪಾ ಇವರ ಶಿಸ್ತು ಪ್ರಾಧಿಕಾರವು ಜಿಲ್ಲಾ ಪಂಚಾಯತ್ ಆಗಿರುವುದರಿಂದ ಅವರ ವಿರುದ್ಧ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸಿ, ಸೇವೆಯಿಂದ ಅಮಾನತ್ತು ಪಡಿಸಲಾಗಿರುತ್ತದೆಯೆಂದು ಮತ್ತೊಬ್ಬ ಆರೋಪಿತರಾದ ಶ್ರೀ ಶಂಕರ್ ಮಳಗಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ಪ್ರಭಾರಿ ಕಾ.ಇಂ, ಪಂ.ರಾ.ಇಂ ವಿಭಾಗ, ಕೊಪ್ಪಳ ಮತ್ತು ಗ್ರಾ.ಕು.ನೀ ಮತ್ತು ನೈರ್ಮಲ್ಯ ವಿಭಾಗ, ಕೊಪ್ಪಳ) ಇವರ ವಿರುದ್ಧ ಸರ್ಕಾರದ ಹಂತದಲ್ಲಿ ಶಿಸ್ತುಕ್ರಮ ಕೈಗೊಳ್ಳಲು ಕೋರಿರುತ್ತಾರೆ.

ಶ್ರೀ ಶಂಕರಮಳಗಿ, ಇವರು ಮೇಲೆ ಓದಲಾದ ಕ್ರಮಾಂಕ (2) ರ ದಿನಾಂಕ:03.12.2018 ರಂದು ಸಲ್ಲಿಸಿದ್ದ ಮನವಿಯಲ್ಲಿ ಶ್ರೀ ಶಿವಪ್ಪ ತಂದೆ ಮಲ್ಲಪ್ಪ ಚರಾರಿ ಇವರು ನನ್ನ ವಿರುದ್ಧ ಲಂಚ ಬೇಡಿಕೆಯ ಆರೋಪವನ್ನು ಮಾಡಿ ದೂರು ಸಲ್ಲಿಸಿದ್ದು ಭ್ರಷ್ಟಾಚಾರ ನಿಗ್ರಹ ದಳ ರವರು ದಿನಾಂಕ:14.11.2018 ರಂದು ಬಂಧಿಸಿದ್ದು ತಾವು ದಿನಾಂಕ 24.11.2018 ರವರೆಗೆ ನ್ಯಾಯಾಂಗ ಬಂಧನದಲ್ಲಿದ್ದು ಜಾಮೀನಿನ ಮೇಲೆ ಬಿಡುಗಡೆಯಾಗಿರುವುದಾಗಿಯೂ ಹಾಗೂ ತಮಗೆ ಕರ್ತವ್ಯಕ್ಕೆ ಹಾಜರಾಗಲು ಅನುಮತಿ ನೀಡಬೇಕೆಂದು ಕೋರಿದ್ದಾರೆ.

ಪ್ರಕರಣಕ್ಕೆ ಸಂಬಂಧಿಸಿದ ದಾಖಲೆಗಳನ್ನು ಸರ್ಕಾರವು ಪರಿಶೀಲಿಸಿರುತ್ತದೆ. ಶ್ರೀ ಶಂಕರ ಮಳಗಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂ.ರಾ.ಇಂ.ಉಪವಿಭಾಗ ಕೊಪ್ಪಳ ಇವರು ಪಂ.ರಾ.ಇಂ. ವಿಭಾಗ, ಕೊಪ್ಪಳ ಕಛೇರಿಯ ಕಾರ್ಯಪಾಲಕ ಇಂಜಿನಿಯರ್ ಹುದ್ದೆಯ ಹೆಚ್ಚುವರಿ ಪ್ರಭಾರದಲ್ಲಿ ಕೆಲಸ ನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಶ್ರೀ ಶಿವಪ್ಪ ತಂದೆ ಮಲ್ಲಪ್ಪ ಇವರ ಕಛೇರಿಯ ಕೆಲಸದ ನಿಮಿತ್ತವಾಗಿ 10,000/- ರೂ.ಗಳ ಅಕ್ರಮ ಸಂಭಾವನೆಗೆ ಬೇಡಿಕೆ ಇಟ್ಟಿರುವುದು ಹಾಗೂ ಈ ಸಂಬಂಧ ಭ್ರಷ್ಟಾಚಾರ ನಿಗ್ರಹ ದಳದಲ್ಲಿ ಗುನ್ನ ಸಂಖ್ಯೆ 8/2018 ನ್ನು ಲಂಚ ಪ್ರತಿಬಂಧಕ ಕಾಯ್ದೆಯ ಕಲಂ 7(ಎ) ರ ಅನುಸಾರ ದಾಖಲಿಸಿ ಕ್ರಮಕೈಗೊಂಡಿರುತ್ತಾರೆ. ಅಕ್ರಮ ಸಂಭಾವನೆಯ ಮೊತ್ತವನ್ನು ಶ್ರೀ ಶಂಕರ ಮಳಗಿ, ಪ್ರಭಾರಿ ಕಾರ್ಯಪಾಲಕ ಇಂಜಿನಿಯರ್ ಇವರ

ಅಧೀನದಲ್ಲಿ ಕೆಲಸ ನಿರ್ವಹಿಸುತ್ತಿರುವ ಕುಮಾರಿ ಶಿಲ್ಪ ಕಿರಿಯ ಇಂಜಿನಿಯರ್‌ರವರು ಸ್ವೀಕರಿಸಿದ್ದು ಈ ಇಬ್ಬರು ಆಪಾದಿತರು ಅಕ್ರಮ ಸಂಭಾವನೆಗಾಗಿ ಬೇಡಿಕೆ ಸಲ್ಲಿಸುವ ಮೂಲಕ ತೀವ್ರ ಸ್ವರೂಪದ ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುತ್ತದೆ. ಹಾಗಾಗಿ ಈ ಇಬ್ಬರು ನೌಕರರು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯವನ್ನು ಪ್ರಮಾಣಿಕವಾಗಿ ನಿರ್ವಹಿಸದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ವರ್ತಿಸಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966 ರ ನಿಯಮ 3(1) ನ್ನು ಉಲ್ಲಂಘಿಸಿರುತ್ತಾರೆ. ಅಲ್ಲದೆ ಅವರನ್ನು ಸೇವೆಯಲ್ಲಿ ಮುಂದುವರೆಸಿದ್ದಲ್ಲಿ ಸಾಕ್ಷಿಗಳ ಮೇಲೆ ಪ್ರಭಾವ ಬೀರುವ ಮತ್ತು ದಾಖಲೆಗಳ ನಾಶಪಡಿಸುವ ಸಾಧ್ಯತೆ ಇರುವುದರಿಂದ ಅವರನ್ನು ಸೇವೆಯಲ್ಲಿ ಮುಂದುವರೆಸುವುದು ಸೂಕ್ತವಾಗಿರುವುದಿಲ್ಲ.

ಆದ್ದರಿಂದ, ಸದರಿಯವರ ವಿರುದ್ಧ ದಾಖಲಾಗಿರುವ ಮೊಕದ್ದಮೆ ಮತ್ತು ಈ ಸಂಬಂಧ ಕೈಗೊಳ್ಳಬಹುದಾದ ಕ್ರಮಗಳನ್ನು ಬಾಕಿ ಇರಿಸಿ ಶ್ರೀ ಶಂಕರ ಮಳಗಿ ಇವರನ್ನು ಸೇವೆಯಿಂದ ಅಮಾನತ್ತು ಪಡಿಸಲು ಸರ್ಕಾರವು ತೀರ್ಮಾನಿಸಿದೆ. ಆದ್ದರಿಂದ ಈ ಆದೇಶ.

**<u>ಆದೇಶ ಸಂಖ್ಯೆ:ಗ್ರಾಅಪ 106 ಇಎನ್‌ಕ್ಯೂ 2018 ಬೆಂಗಳೂರು, ದಿನಾಂಕ:31.12.2018</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಶಂಕರ ಮಳಗಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಕೊಪ್ಪಳ ಇವರ ವಿರುದ್ಧ ಭ್ರಷ್ಟಾಚಾರ ನಿಯಂತ್ರಣ ಪೊಲೀಸ್ ಠಾಣೆ, ಕೊಪ್ಪಳ ಇಲ್ಲಿ ದಾಖಲಾಗಿರುವ ಪ್ರಕರಣ ಸಂಖ್ಯೆ: 08/2018 ಕ್ಕೆ ಸಂಬಂಧಿಸಿದಂತೆ ನ್ಯಾಯಂಗ ಬಂಧನದಲ್ಲಿ ಕಳೆದ ದಿನಾಂಕ:14.11.2018 ರಿಂದ 24.11.2018 ರವರೆಗಿನ ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು, 1957 ರ ನಿಯಮ 10 (2) (ಎ) ರ ಅನುಸಾರ ಅಮಾನತ್ತಿನಲ್ಲಿ ಕಳೆದ ಅವದಿ ಎಂದು ಪರಿಗಣಿಸಿ ಆದೇಶಿಸಿದೆ.

ಮುಂದುವರೆದು, ಶ್ರೀ ಶಂಕರ ಮಳಗಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಕೊಪ್ಪಳ ಇವರ ವಿರುದ್ಧ ದಾಖಲಾಗಿರುವ ಅಕ್ರಮ ಸಂಭಾವನೆಯ ಮೊಕದ್ದಮೆ ಹಾಗೂ ತತ್ಸಂಬಂಧದ ಕ್ರಮಗಳನ್ನು ಬಾಕಿ ಇರಿಸಿ ಸದರಿಯವರನ್ನು ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು, 1957 ರ ನಿಯಮ 10 (1) (ಎ) ರನ್ವಯ ತಕ್ಷಣದಿಂದ ಜಾರಿಗೆ ಬರುವಂತೆ ಸೇವೆಯಿಂದ ಅಮಾನತ್ತು ಪಡಿಸಿದೆ.

ಅಮಾನತ್ತಿನ ಅವದಿಯಲ್ಲಿ ಸದರಿಯವರು ನಿಯಮಾನುಸಾರ ಜೀವನಾಧಾರ ಭತ್ಯೆಗೆ ಅರ್ಹರಿರುತ್ತಾರೆ. ಸಕ್ಷಮ ಪ್ರಾಧಿಕಾರದ ಅನುಮೋದನೆ ಇಲ್ಲದೆ ಕೇಂದ್ರ ಸ್ಥಾನವನ್ನು ಬಿಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

31/12/2018
(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

<u>ಇವರಿಗೆ:</u>

1. ಮಹಾಲೇಖಪಾಲರು, (ಲೆಕ್ಕ ಪತ್ರ 1&2)/(ಆಡಿಟ್) ಕರ್ನಾಟಕ, ಬೆಂಗಳೂರು.
2. ಅಪರ ಪೊಲೀಸ್ ಮಹಾ ನಿರ್ದೇಶಕರು, ಭ್ರಷ್ಟಾಚಾರ ನಿಯಂತ್ರಣಾ ದಳ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.

3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು, ಕೆ.ಆರ್.ವೃತ್ತ, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲ ಸಾರಿಗೆ ಇಲಾಖೆ, (ಸೇವೆಗಳು–ಎ ಮತ್ತು ಸಿ).
7. ಸಂಬಂಧಪಟ್ಟ ಅಧಿಕಾರಿ
8. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು
9. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ ಇವರ ಆಪ್ತ ಕಾರ್ಯದರ್ಶಿ
10. ಶಾಖಾ ರಕ್ಷಾ ಕಡತ/ಕಂಪ್ಯೂಟರ್ ಸೆಲ್/ ಹೆಚ್ಚುವರಿ ಪ್ರತಿ.